**All India Radio: Bangalore**
**National Bulletins In Kannada**
**21.05.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಅಂತಾರಾಷ್ಟ್ರೀಯ ’ಬೂಕರ್’ ಪ್ರಶಸ್ತಿಗೆ ಭಾಜನರಾದ ಕನ್ನಡದ ಹೆಸರಾಂತ ಸಾಹಿತಿ ಬಾನು ಮುಷ್ತಾಕ್

೨. ಕರ್ನಾಟಕದ ನೌಕಾ ನೆಲೆಗೆ ಇಂದು ಸೇರ್ಪಡೆಗೊಳ್ಳಲಿರುವ ಸಾಂಪ್ರದಾಯಿಕವಾಗಿ ನಿರ್ಮಿಸಲಾದ ಪ್ರಾಚೀನ ಹೊಲಿಗೆ ಹಡಗು- ಐಎನ್‌ಎಸ್ ಕೌಂಡಿನ್ಯ

೩. ಆಪರೇಷನ್ ಸಿಂದೂರ ಕುರಿತು ಭಾರತದ ರಾಜತಾಂತ್ರಿಕ ಸಂಪರ್ಕಕ್ಕಾಗಿ ಇಂದು ನಾಲ್ಕು ದೇಶಗಳಿಗೆ ಭೇಟಿ ನೀಡಲಿರುವ ಮೊದಲ ಸರ್ವಪಕ್ಷ ನಿಯೋಗ

೪. ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಆರು ವಿಕೆಟ್‌ಗಳಸ ಜಯ

**<><*<><>*><>**

ಕನ್ನಡದ ಹೆಸರಾಂತ ಸಾಹಿತಿ ಹಾಸನ ಮೂಲದ ಬಾನು ಮುಷ್ತಾಕ್ ಅವರು ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಅವರ ಸಣ್ಣಕಥೆಗಳ ಅನುವಾದಿತ ಸಂಕಲನ ’ಹಾರ್ಟ್ ಲ್ಯಾಂಪ್’ ಗೆ ಈ ಪ್ರಶಸ್ತಿ ಲಭಿಸಿದೆ. ಲಂಡನ್ನಿನ ಟೇಟ್ ಮಾಡರ್ನ್‌ನಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿದ ಅವರು, ತಮ್ಮ ಗೆಲುವು ವೈವಿಧ್ಯತೆಗೆ ದೊರೆತ ಜಯ ಎಂದು ಬಣ್ಣಿಸಿದ್ದಾರೆ. ಇದೇ ಮೊದಲ ಬಾರಿಗೆ ಕನ್ನಡದ ಕೃತಿಯೊಂದಕ್ಕೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ದೊರೆತಂದಾಗಿದ್ದು, ಪ್ರಶಸ್ತಿಯು ೫೭ ಲಕ್ಷ ೨೮ ಸಾವಿರ ರೂಪಾಯಿ ನಗದು ಬಹುಮಾನ ಒಳಗೊಂಡಿದೆ.

**<><*<><>*><>**

ಸಾಂಪ್ರದಾಯಿಕವಾಗಿ ನಿರ್ಮಿಸಲಾದ ಪ್ರಾಚೀನ ಹೊಲಿಗೆ ಹಡಗು- ಐಎನ್‌ಎಸ್‌ಸಿ ಕೌಂಡಿನ್ಯ ಭಾರತೀಯ ನೌಕಾಪಡೆಯು ಇಂದು ಕರ್ನಾಟಕದ ನೌಕಾ ನೆಲೆಗೆ ಸೇರ್ಪಡೆ ಮಾಡಲಿದೆ. ಈ ಕಾರ್ಯಕ್ರಮದಲ್ಲಿ ಕೇಂದ್ರ ಸಾಂಸ್ಕೃತಿಕ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಹೊಲಿಗೆ ಹಾಕಿ ಸಿದ್ಧಪಡಿಸಿದ ಹಡಗು ಅಜಂತಾ ಗುಹೆಗಳ ವರ್ಣಚಿತ್ರದಿಂದ ಪ್ರೇರಿತವಾಗಿದ್ದು ೫ ನೇ ಶತಮಾನದ ಹಡಗಿನ ಪ್ರತಿಕೃತಿಯಾಗಿದೆ. ಸಾಂಪ್ರದಾಯಿಕ ಹಡಗು ನಿರ್ಮಾತೃ ಬಾಬು ಶಂಕರನ್ ನೇತೃತ್ವದ ಕೇರಳದ ಕುಶಲಕರ್ಮಿಗಳು ಸಂಪೂರ್ಣವಾಗಿ ಸಾಂಪ್ರದಾಯಿಕ ವಿಧಾನದಿಂದ ಕಚ್ಚಾ ವಸ್ತುಗಳನ್ನು ಬಳಸಿ ಇದನ್ನು ತಯಾರು ಮಾಡಿದ್ದಾರೆ.

**<><*<><>*><>**

ಆಪರೇಷನ್ ಸಿಂಧೂರ್ ಕುರಿತು ಭಾರತದ ರಾಜತಾಂತ್ರಿಕ ಸಂಪರ್ಕಕ್ಕಾಗಿ ರಚಿಸಲಾದ ಏಳು ನಿಯೋಗಗಳಲ್ಲಿ ಮೊದಲ ಸರ್ವಪಕ್ಷ ನಿಯೋಗ ಇಂದು ನಾಲ್ಕು ದೇಶಗಳಿಗೆ ತೆರಳಲಿದೆ. ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ನಿಯೋಗ ಯುಎಇ, ಲೈಬೀರಿಯಾ, ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ ಮತ್ತು ಸಿಯೆರಾ ಲಿಯೋನ್‌ಗೆ ತೆರಳಲಿದೆ. ಜೆಡಿ ಯು ಸಂಸದ ಸಂಜಯ್ ಝಾ ಮತ್ತು

ಡಿಎಂಕೆ ಸಂಸದೆ ಕನಿಮೋಳಿ ಕರುಣಾನಿಧಿ ನೇತೃತ್ವದ ಎರಡು ನಿಯೋಗಗಳು ನಾಳೆ ಹೊರಡಲಿವೆ. ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಭಾರತದ ಬಲವಾದ ಸಂದೇಶದೊಂದಿಗೆ, ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಭಯೋತ್ಪಾದನೆಯನ್ನು ಎದುರಿಸಲು ದೇಶದ ರಾಷ್ಟ್ರೀಯ ಒಮ್ಮತ ಮತ್ತು ದೃಢನಿಶ್ಚಯದ ವಿಧಾನವನ್ನು ಬಹುಪಕ್ಷ ನಿಯೋಗಗಳು ಪ್ರದರ್ಶಿಸಲಿವೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ, ನಾಳೆ ರಾಜಸ್ಥಾನದ ಬಿಕನೇರ್‌ನಲ್ಲಿ ೨೬ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ರೈಲ್ವೆ, ರಸ್ತೆಮಾರ್ಗಗಳು, ವಿದ್ಯುತ್, ನೀರು, ಹೊಸ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಗಳನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ.

ತಮ್ಮ ಭೇಟಿಯ ಸಮಯದಲ್ಲಿ ಪ್ರಧಾನಿಯವರು, ಕರ್ನಾಟಕದ ಗೋಕಾಕ, ಧಾರವಾಡ, ಮುನಿರಾಬಾದ್, ಗದಗ, ಬಾಗಲಕೋಟೆ ಸೇರಿದಂತೆ ದೇಶದ ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೮೬ ಜಿಲ್ಲೆಗಳಲ್ಲಿ ೧೦೩ ಪುನರಾಭಿವೃದ್ಧಿಗೊಂಡ ಅಮೃತ್ ರೈಲ್ವೆ ನಿಲ್ದಾಣಗಳನ್ನು ಉದ್ಘಾಟಿಸಲಿದ್ದಾರೆ. ಈ ಕುರಿತು ಪ್ರಧಾನ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ.ಮಂಜುನಾಥ್ ಕನಮಡಿ, ಆಕಾಶವಾಣಿ ಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ: ಡಾ.ಮಂಜುನಾಥ್ ( ೪೮ ಸೆಕೆಂಡ್ಸ್)**

ರಾಜಸ್ಥಾನದಲ್ಲಿ ಏಳು ರಸ್ತೆ ಯೋಜನೆಗಳನ್ನು ಸಹ ಲೋಕಾರ್ಪಣೆ ಮಾಡಲಿದ್ದಾರೆ. ನಾಲ್ಕು ಸಾವಿರದ ೮೫೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೌಲ್ಯದ ರಸ್ತೆ ಯೋಜನೆಗಳು ಸರಕು ಮತ್ತು ಜನರ ಸುಗಮ ಸಂಚಾರಕ್ಕೆ ಅನುಕೂಲವಾಗುತ್ತವೆ. ಹೆದ್ದಾರಿಗಳು ಭಾರತ-ಪಾಕ್ ಗಡಿಯವರೆಗೆ ವಿಸ್ತರಿಸುತ್ತವೆ, ಭದ್ರತಾ ಪಡೆಗಳಿಗೆ ಪ್ರವೇಶವನ್ನು ಹೆಚ್ಚಿಸುತ್ತವೆ ಮತ್ತು ದೇಶದ ರಕ್ಷಣಾ ಮೂಲಸೌಕರ್ಯವನ್ನು ಬಲಪಡಿಸುತ್ತವೆ.

**<><*<><>*><>**

ಸಿಂಧೂರ ಕಾರ್ಯಾಚರಣೆಯ ಮೂಲಕ ಪಾಕಿಸ್ತಾನದಲ್ಲಿ ಹೆಚ್ಚಿನ ಸಂಖ್ಯೆಯ ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಯಶಸ್ವಿಯಾಗಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಲಕ್ನೋದಲ್ಲಿ ನಡೆದ ಕಾರ್ಯಕ್ರಮವೊಂದನ್ನುದ್ದೇಶಿಸಿ ಮಾತನಾಡಿದ ಅವರು, ಆಪರೇಷನ್ ಸಿಂದೂರ್ ಸಮಯದಲ್ಲಿ ಭಾರತೀಯ ಸಶಸ್ತ್ರ ಪಡೆಗಳು ನುರಿತ ತಜ್ಞರ ನಿಖರತೆಯೊಂದಿಗೆ ಕಾರ್ಯನಿರ್ವಹಿಸಿದವು, ಗಡಿಯುದ್ದಕ್ಕೂ ಭಯೋತ್ಪಾದನೆಯ ಬೇರುಗಳನ್ನು ನಿಖರತೆ ಮತ್ತು ಶಿಸ್ತಿನಿಂದ ಗುರಿಯಾಗಿಸಿ ಧ್ವಂಸ ಮಾಡಿವೆ ಎಂದು ಹೇಳಿದರು.

**ಧ್ವನಿ : ರಾಜನಾಥ್ ( ೨೩ ಸೆಕೆಂಡ್ಸ್)**

ಇದೇ ಸಂದರ್ಭದಲ್ಲಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಆಪರೇಷನ್ ಸಿಂದೂರ್ ಭಾರತದ ಸ್ವಾಭಿಮಾನ ಮತ್ತು ಮಹಿಳಾ ಶಕ್ತಿಯ ಸಂಕೇತವಾಗಿದೆ ಎಂದು ಹೇಳಿದರು. ಇದಕ್ಕೂ ಮೊದಲು, ರಕ್ಷಣಾ ಸಚಿವರು ಅಮೌಸಿಯಿಂದ ನಾಡರ್‌ಗಂಜ್‌ವರೆಗಿನ ತಿರಂಗ ಯಾತ್ರೆಯಲ್ಲಿಯೂ ಭಾಗವಹಿಸಿದ್ದರು.

**<><*<><>*><>**

ಕೇಂದ್ರ ಗೃಹ ಸಚಿವಾಲಯವು ೨೦೨೬ ರ ಪದ್ಮ ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ. ಜುಲೈ ೩೧ ರವರೆಗೆ ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ

ನಾಮನಿರ್ದೇಶನಗಳನ್ನು ಸಲ್ಲಿಸಬಹುದು. ನಾಮನಿರ್ದೇಶನಗಳು ಪೋರ್ಟಲ್‌ನಲ್ಲಿ ಲಭ್ಯವಿರುವ ಸ್ವರೂಪದಲ್ಲಿ ನಿರ್ದಿಷ್ಟಪಡಿಸಿದ ಎಲ್ಲಾ ಸಂಬಂಧಿತ ವಿವರಗಳನ್ನು ಒಳಗೊಂಡಿರಬೇಕು, ಇದರಲ್ಲಿ ಆಯಾ ಕ್ಷೇತ್ರಗಳಲ್ಲಿ ಶಿಫಾರಸು ಮಾಡಲಾದ ಜನರ ವಿಶಿಷ್ಟ ಮತ್ತು ಅಸಾಧಾರಣ ಸಾಧನೆಗಳನ್ನು ಸ್ಪಷ್ಟವಾಗಿ ತಿಳಿಸುವ ನಿರೂಪಣಾ ರೂಪದಲ್ಲಿ ಉಲ್ಲೇಖವೂ ಸೇರಿರಬೇಕು ಎಂದು ಸಚಿವಾಲಯ ತಿಳಿಸಿದೆ. ಪದ್ಮ ವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ, ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಸೇರಿವೆ. ೧೯೫೪ ರಲ್ಲಿ ಸ್ಥಾಪಿಸಲಾದ ಈ ಪ್ರಶಸ್ತಿಗಳನ್ನು ಪ್ರತಿ ವರ್ಷ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಘೋಷಿಸಲಾಗುತ್ತದೆ. ಈ ಪ್ರಶಸ್ತಿಯು 'ವಿಶಿಷ್ಟ ಕಾರ್ಯ'ವನ್ನು ಗುರುತಿಸಲು ಉದ್ದೇಶಿಸಿದ್ದು, ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಕಾರ್ಯ, ವಿಜ್ಞಾನ ಮತ್ತು ಎಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರಿಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಮುಂತಾದ ಎಲ್ಲಾ ವಿಭಾಗಗಳಲ್ಲಿ ವಿಶಿಷ್ಟ ಮತ್ತು ಅಸಾಧಾರಣ ಸಾಧನೆ ಮಾಡಿದವರಿಗೆ ನೀಡಲಾಗುತ್ತದೆ. ಜನಾಂಗ, ಉದ್ಯೋಗ, ಸ್ಥಾನ ಅಥವಾ ಲಿಂಗಭೇದವಿಲ್ಲದೆ ಎಲ್ಲಾ ವ್ಯಕ್ತಿಗಳು ಈ ಪ್ರಶಸ್ತಿಗಳಿಗೆ ಅರ್ಹರು. ವೈದ್ಯರು ಮತ್ತು ವಿಜ್ಞಾನಿಗಳನ್ನು ಹೊರತುಪಡಿಸಿ, ಪಿಎಸ್‌ಯುಗಳಲ್ಲಿ ಕೆಲಸ ಮಾಡುವವರು ಸೇರಿದಂತೆ ಸರ್ಕಾರಿ ನೌಕರರು ಪದ್ಮ ಪ್ರಶಸ್ತಿಗಳಿಗೆ ಅರ್ಹರಲ್ಲ.

**<><*<><>*><>**

ಮುಂದಿನ ತಿಂಗಳು ೨೧ ರಂದು ನಡೆಯಲಿರುವ ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ, ಯೋಗ ಸಂಗಮ ಪೋರ್ಟಲ್‌ನಲ್ಲಿ ಸಾವಿರಕ್ಕೂ ಹೆಚ್ಚು ಸಂಸ್ಥೆಗಳು ನೋಂದಾಯಿಸಿಕೊಂಡಿದ್ದು, ಇದು ವಿಶ್ವದ ಅತಿದೊಡ್ಡ ಯೋಗ ದಿನಾಚರಣೆಯಾಗಲಿದೆ. ಸಚಿವಾಲಯದ ಪ್ರಮುಖ ಯೋಗ ಸಂಗಮ ಉಪಕ್ರಮದ ಅಡಿಯಲ್ಲಿ ಶಾಲೆಗಳು, ಕಾಲೇಜುಗಳು, ಕಾರ್ಪೊರೇಟ್‌ಗಳು, ಸರ್ಕಾರೇತರ ಸಂಸ್ಥೆಗಳು, ನಿವಾಸಿ ಕಲ್ಯಾಣ ಸಂಘಗಳು, ಸರ್ಕಾರಿ ಇಲಾಖೆಗಳು ಮತ್ತು ತಳಮಟ್ಟದ ಸಮುದಾಯಗಳು ಸೇರಿದಂತೆ ಹಲವಾರು ಸಂಸ್ಥೆಗಳು ತಮ್ಮ ಪ್ರಸ್ತಾವನೆಗಳನ್ನು ಸಲ್ಲಿಸಿವೆ ಎಂದು ಆಯುಷ್ ಸಚಿವಾಲಯ ತಿಳಿಸಿದೆ. ಈ ಗುಂಪುಗಳು ಸಾಮಾನ್ಯ ಯೋಗ ಶಿಷ್ಟಾಚಾರಕ್ಕೆ ಅನುಗುಣವಾಗಿ ಯೋಗ ಪ್ರದರ್ಶನಗಳನ್ನು ನಡೆಸುವುದಾಗಿ ಪ್ರತಿಜ್ಞೆ ಮಾಡಿವೆ, ದೇಶವನ್ನು ಉತ್ಸಾಹ, ಉಸಿರು ಮತ್ತು ಚಲನೆಯಲ್ಲಿ ಒಂದುಗೂಡಿಸುತ್ತದೆ. ಆಚರಣೆಯ ಸಮಯದಲ್ಲಿ, ಒಂದು ಲಕ್ಷಕ್ಕೂ ಹೆಚ್ಚು ಸ್ಥಳಗಳು ಯೋಗಕ್ಷೇಮ ಮತ್ತು ಏಕತೆಯ ರೋಮಾಂಚಕ ಕೇಂದ್ರಗಳಾಗಿ ರೂಪಾಂತರಗೊಳ್ಳುವ ನಿರೀಕ್ಷೆಯಿದೆ.

**<><*<><>*><>**

ಕರ್ನಾಟಕ ಹೈಕೋರ್ಟ್‌ನ ನ್ಯಾಯಾಧೀಶ ನ್ಯಾಯಮೂರ್ತಿ ಕೆಂಪಯ್ಯ ಸೋಮಶೇಖರ್ ಅವರನ್ನು ಮಣಿಪುರ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಕ ಮಾಡಿದ್ದಾರೆ. ಕಾನೂನು ಮತ್ತು ನ್ಯಾಯ ಸಚಿವಾಲಯವು ಈ ನೇಮಕವನ್ನು ತಿಳಿಸಿದೆ.

**<><*<><>*><>**

ಮಿಜೋರಾಂ ಅನ್ನು ಸಂಪೂರ್ಣ ಸಾಕ್ಷರ ರಾಜ್ಯವೆಂದು ಘೋಷಿಸಲಾಗಿದೆ. ಮುಖ್ಯಮಂತ್ರಿ ಲಾಲ್ದುಹೋಮ ಅವರು ನಿನ್ನೆ ಐಜ್ವಾಲ್‌ನಲ್ಲಿರುವ ಮಿಜೋರಾಂ ವಿಶ್ವವಿದ್ಯಾಲಯದಲ್ಲಿ ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ಅವರ ಸಮ್ಮುಖದಲ್ಲಿ ಈ ಘೋಷಣೆ ಮಾಡಿದರು. ೨೯೨ ಸಮರ್ಪಿತ ಸ್ವಯಂಸೇವಕ ಶಿಕ್ಷಕರ ಸಹಾಯದಿಂದ ೩,೦೨೬ ಅನಕ್ಷರಸ್ಥರನ್ನು ಗುರುತಿಸಿ ಶಿಕ್ಷಣ ನೀಡಿದ ನವ ಭಾರತ ಸಾಕ್ಷರತಾ ಕಾರ್ಯಕ್ರಮ - ಎನ್‌ಐಎಲ್‌ಪಿ ಅನುಷ್ಠಾನದ ನಂತರ ಈ ಸಾಧನೆ ಮಾಡಲಾಗಿದೆ. ಈಗ ಶೇ. ೯೮.೨ ರಲ್ಲಿರುವ ಸಾಕ್ಷರತಾ ದರದೊಂದಿಗೆ, ಮಿಜೋರಾಂನ ಯಶಸ್ಸು ಅದರ ಬಲವಾದ ಸಮುದಾಯ ಮನೋಭಾವ ಮತ್ತು ತ್ಲಾಮ್‌ಗೈಹ್ನಾದ ಮಿಜೋ ಸಾಂಸ್ಕೃತಿಕ

ಮೌಲ್ಯದಿಂದ ಮಾರ್ಗದರ್ಶಿಸಲ್ಪಟ್ಟ ಸಮಗ್ರ ಶಿಕ್ಷಣಕ್ಕೆ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಮಾಹಿತಿ ನೀಡಿದರು.

**<><*<><>*><>**

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಆರು ವಿಕೆಟ್‌ಗಳಿಂದ ಮಣಿಸಿದೆ.  ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲದೆ.

**<><*<><>*><>**

ಕರ್ನಾಟಕದ ಕರಾವಳಿ ಮತ್ತು ಘಟ್ಟ ಪ್ರದೇಶಗಳಲ್ಲಿ ಇಂದು ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಅಸ್ಸಾಂ, ಮೇಘಾಲಯ, ಕೊಂಕಣ, ಗೋವಾ ಮತ್ತು ಮಧ್ಯ ಮಹಾರಾಷ್ಟ್ರದಲ್ಲೂ ಇಂದು ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಆಂಧ್ರಪ್ರದೇಶ, ಬಿಹಾರ ಮತ್ತು ಜಾರ್ಖಂಡ್‌ನಲ್ಲೂ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಈ ತಿಂಗಳ ೨೬ ರವರೆಗೆ ಉತ್ತರಾಖಂಡ, ಪಂಜಾಬ್, ಹರಿಯಾಣ, ಚಂಡೀಗಢ ಮತ್ತು ಉತ್ತರ ಪ್ರದೇಶದಲ್ಲಿ ಗುಡುಗು ಸಹಿತ ಮಳೆ, ಬಿರುಗಾಳಿ ಮತ್ತು ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಜರ್ಮನಿಯ ಸುಹ್ಲ್‌ನಲ್ಲಿ ನಿನ್ನೆ ನಡೆದ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್‌ನ ೫೦ ಮೀಟರ್ ರೈಫಲ್ ಪ್ರೋನ್ ಶೂಟಿಂಗ್ ಸ್ಪರ್ಧೆಯಲ್ಲಿ ಆಡ್ರಿಯನ್ ಕರ್ಮಾಕರ್ ಬೆಳ್ಳಿ ಪದಕದೊಂದಿಗೆ ಭಾರತದ ಪದಕ ಖಾತೆಯನ್ನು ತೆರೆದಿದ್ದಾರೆ. ೨೦ ವರ್ಷದ ಈ ಸ್ಪರ್ಧಿ ೬೨೬.೭ ಅಂಕಗಳನ್ನು ಗಳಿಸಿದ್ದು, ಚಿನ್ನ ಗೆದ್ದ ಸ್ವೀಡನ್‌ನ ಜೆಸ್ಪರ್ ಜೋಹಾನ್ಸನ್‌ಗಿಂತ ಕೇವಲ ೦.೩ ಅಂಕಗಳ ಹಿಂದಿದ್ದಾರೆ. ಈ ಹಿಂದೆ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಜೂನಿಯರ್‌ಗಳನ್ನು ಪ್ರತಿನಿಧಿಸಿದ್ದರೂ, ಸ್ಪರ್ಧೆ ಪೂರ್ಣಗೊಳಿಸಿದ ಕೆಲವೇ ಸ್ಪರ್ಧಿಗಳಲ್ಲಿ ಇವರು ಒಬ್ಬರು. ವಿಶ್ವಕಪ್‌ನಲ್ಲಿ ಎಂದಿಗೂ ಭಾಗವಹಿಸದ ಆಡ್ರಿಯನ್ ಆತ್ಮವಿಶ್ವಾಸದಿಂದ ಗುಂಡು ಹಾರಿಸಿದರು. ಆಡ್ರಿಯನ್ ಅವರ ಪ್ರದರ್ಶನವು ಈ ಸ್ಪರ್ಧೆಯಲ್ಲಿ ಹೊಸ ಜೂನಿಯರ್ ರಾಷ್ಟ್ರೀಯ ದಾಖಲೆಯನ್ನು ಸ್ಥಾಪಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**